**2** ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರದನ್ಯಾದಂ**.,**ರವರ ನ್ಯಾಯಾಲಯ**,** ಕಡೂರು**.**

<u>ಸಿ.ಸಿ.ನಂ**. 4/2019**</u>

ದಿನಾಂಕಃ **15-12-2025** ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು**.**

| | | |
|---|---|---|
| ಸಾಕ್ಷಿಯ ಹೆಸರು ಃ | ರಾಜಶೇಖರ್ | ಚಾಸಾ-29, ಪ್ರಾಸ-8 |
| ತಂದೆಯ ಹೆಸರು ಃ | ಕರಿಯಪ್ಪ | |
| ವಯಸ್ಸು ಃ | 46 ವರ್ಷ | |
| ಉದ್ಯೋಗ ಃ | ಮುಖ್ಯ ಪೇದೆ | |
| ವಾಸ ಃ | ತರೀಕೆರೆ | |

<u>ಮುಖ್ಯ ವಿಚಾರಣೆಃ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರವರಿಂದಃ</u>

ನಾನು 2027 ರಿಂದ 2024 ರವರೆಗೆ ನಾನು ಪಂಚನಹಳ್ಳಿ ಠಾಣೆಯಲ್ಲಿ ಮುಖ್ಯ ಪೇದೆಯಾಗಿ ಕರ್ತವ್ಯ ನಿರ್ವಹಿಸಿದ್ದೇನೆ.

ದಿಃ 17.01.2018 ರಂದು ನಾನು ಠಾಣಾ ಪ್ರಭಾರೆಯಲ್ಲಿದ್ದಾಗ ಎಎಸ್ಐ ಕೃಷ್ಣಮೂರ್ತಿ ರವರು ಗಾಯಾಳುವಿನ ಹೇಳಿಕೆಯನ್ನು ಆಸ್ಪತ್ರೆಯಲ್ಲಿ ಪಡೆದುಕೊಂಡು ನನ್ನ ಮುಂದೆ ಬೆಳಗಿನ ಜಾವ 3.15 ಗಂಟೆಗೆ ಹಾಜರುಪಡಿಸಿದ ನಿಪಿ-4 ರ ಹೇಳಿಕೆ ಮೇರೆಗೆ ಸದರಿ ಹೇಳಿಕೆಯನ್ನು ಸ್ವೀಕರಿಸಿ ಠಾಣಾ ಮೊಕದ್ದಮೆ ಸಂಖ್ಯೆ 1ಃ2018 ರಂತೆ ಪ್ರಕರಣ ದಾಖಲು ಮಾಡಿ ಪ್ರಥಮ ವರ್ತಮಾನ ವರದಿಯನ್ನು ನ್ಯಾಯಾಲಯಕ್ಕೆ ಮತ್ತು ಮೇಲಾಧಿಕಾರಿಗಳಿಗೆ ರವಾನಿಸಿರುತ್ತೇನೆ. ಸಾಕ್ಷಿ ನಿಪಿ-4 ರ ಹೇಳಿಕೆಯಲ್ಲಿರುವ ತನ್ನ ಸಹಿ ನೋಡಿ ಗುರುತಿಸಿದ್ದು ಅದನ್ನು ನಿಪಿ-4(ಬಿ) ಎಂದು, ಪ್ರಥಮ ವರ್ತಮಾನ ವರದಿಯನ್ನು ನಿಪಿ-20 ಎಂದು, ಸಹಿಯನ್ನು ನಿಪಿ-20(ಎ) ಎಂದು ಗುರುತಿಸಲಾಯಿತು. ಮುಂದಿನ ತನಿಖೆಗಾಗಿ ಕಡತವನ್ನು ಚಾಸಾ-31 ರವರಿಗೆ ಹಸ್ತಾಂತರಿಸಿರುತ್ತೇನೆ.

<u>ಪಾಟೀಸವಾಲುಃ ಆರೋಪಿ ಪರ ಶ್ರೀ ಎಂ ಓ ಜೆ ವಕೀಲರಿಂದಃ</u>

ನಾನು ಕೃತ್ಯ ನಡೆದ ಸ್ಥಳಕ್ಕೆ ಬೇಟಿ ನೀಡಿಲ್ಲ ಎಂದರೆ ಸರಿ. ಠಾಣೆಯಲ್ಲೇ ಕುಳಿತು ಸುಳ್ಳು ವರದಿಯ ಮೇರೆಗೆ ಸುಳ್ಳು ಪ್ರಕರಣ ದಾಖಲಿಸಿದ್ದೇನೆ ಎಂದರೆ ಸರಿಯಲ್ಲ. ಆರೋಪಿಯ ತಪ್ಪಿನಿಂದ ಯಾವುದೇ ಘಟನೆ ಆಗದೇ ಇದ್ದರೂ ಸಹ ಮೇಲಾಧಿಕಾರಿಗಳ ಮಾತು ಕೇಳಿ ಸುಳ್ಳು ಪ್ರಕರಣ ದಾಖಲಿಸಿದ್ದೇನೆ ಎಂದರೆ ಸರಿಯಲ್ಲ. ಪಿರ್ಯಾದುದಾರರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

<u>ಮರು ವಿಚಾರಣೆ ಃ ಇಲ್ಲ</u>

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿದನ್ನು ಬೆರಳಚ್ಚುಗಾರರಿಗೆ ಉಕ್ತಲೇಖನ ನೀಡಿ ಬೆರಳಚ್ಚು ಮಾಡಿಸಲಾಯಿತು)

ಓ ಹೇ ಕೇ ಸ ಇ

Sd/-

2 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು
ಪ್ರಃದಃನ್ಯಾಃದಂ.,ರವರು, ಕಡೂರು.